# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 267
2. ಸದಸ್ಯರ ಹೆಸರು : ಶ್ರೀ. ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 06.07.2023
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಿಂದ ಕೇಂದ್ರಕ್ಕೆ ವಿವಿಧ ರೂಪದಲ್ಲಿ ಸಂದಾಯವಾಗುವ ತೆರಿಗೆಯ ಒಟ್ಟು ಮೊತ್ತ ಎಷ್ಟು; ಇದರಲ್ಲಿ ಮರಳಿ ರಾಜ್ಯಕ್ಕೆ ಸಂದಾಯವಾಗುವ ಒಟ್ಟು ಮೊತ್ತವೆಷ್ಟು; | ರಾಜ್ಯದಿಂದ ಕೇಂದ್ರಕ್ಕೆ ಸಂದಾಯವಾಗುವ ತೆರಿಗೆ ಮಾಹಿತಿಯು ರಾಜ್ಯ ಸರ್ಕಾರದ ಬಳಿ ಲಭ್ಯವಿರುವುದಿಲ್ಲ. ಕೇಂದ್ರ ಸರ್ಕಾರವು ಹಣಕಾಸು ಆಯೋಗದ ಶಿಫಾರಸ್ಸಿನ ಆಧಾರದ ಮೇಲೆ ರಾಜ್ಯದ ತೆರಿಗೆ ಪಾಲನ್ನು ನೀಡುತ್ತದೆ. ಮಹಾಲೇಖಪಾಲರ ಪೂರ್ವವಾಸ್ತವಿಕ ಲೆಕ್ಕದಂತೆ 2022-23ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು 34,596 ಕೋಟಿ ರೂ.ಗಳ ತೆರಿಗೆ ಪಾಲನ್ನು ನೀಡಿರುತ್ತದೆ. |
| ಆ | ರಾಜ್ಯದ ತೆರಿಗೆ ಹಕ್ಕನ್ನು ಸಮರ್ಪಕವಾಗಿ ಮರಳಿ ಪಡೆಯುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಕೇಂದ್ರ ಸರ್ಕಾರವು ಹಣಕಾಸು ಆಯೋಗದ ಶಿಫಾರಸ್ಸಿನಂತೆ ರಾಜ್ಯಗಳಿಗೆ ತೆರಿಗೆ ಪಾಲನ್ನು ನೀಡಬೇಕಾಗಿರುತ್ತದೆ. ಅದರಂತೆ ಈವರೆವಿಗೂ ಕೇಂದ್ರ ಸರ್ಕಾರವು ರಾಜ್ಯದ ತೆರಿಗೆ ಪಾಲನ್ನು ನೀಡುತ್ತಾ ಬಂದಿರುತ್ತದೆ. |
| ಇ | 15ನೆಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ರಾಜ್ಯಕ್ಕೆ ಬರಬೇಕಾದ ಸುಮಾರು ಐದು ಸಾವಿರ ಕೋಟಿಗೂ ಹೆಚ್ಚುವರಿ ವಿಶೇಷ ಅನುದಾನವನ್ನು ಕೇಂದ್ರವು ಬಿಡುಗಡೆ ಮಾಡಲು ನಿರಾಕರಿಸುತ್ತಿರುವುದು ನಿಜವೇ; ಹೌದಾದಲ್ಲಿ, ಇದನ್ನು ಪಡೆಯುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಯಾವ ಕ್ರಮ ಕೈಗೊಂಡಿದೆ? | 15ನೇ ಹಣಕಾಸು ಆಯೋಗವು 2020-21ರ ಮಧ್ಯಂತರ ವರದಿಯಲ್ಲಿ ರಾಜ್ಯಕ್ಕೆ 5,495 ಕೋಟಿ ರೂ.ಗಳ ವಿಶೇಷ ಅನುದಾನವನ್ನು ಶಿಫಾರಸ್ಸು ಮಾಡಿರುತ್ತದೆ. ಆದರೆ ಕೇಂದ್ರ ಸರ್ಕಾರವು ಈ ಶಿಫಾರಸ್ಸಿಗೆ ಒಪ್ಪಿಗೆ ನೀಡಿರುವುದಿಲ್ಲ. ರಾಜ್ಯ ಸರ್ಕಾರವು 15ನೇ ಹಣಕಾಸು ಆಯೋಗದ ಈ ವಿಶೇಷ ಅನುದಾನವನ್ನು ನೀಡುವಂತೆ ಕೇಂದ್ರ ಸರ್ಕಾರಕ್ಕೆ ಹಲವು ಬಾರಿ ಪತ್ರ ಮುಖೇನ ಮನವಿ ಮಾಡಿರುತ್ತದೆ. ಆದರೆ ಕೇಂದ್ರ ಸರ್ಕಾರ ರಾಜ್ಯದ ಮನವಿಯನ್ನು ಈವರೆಗೂ ಪುರಸ್ಕರಿಸಿರುವುದಿಲ್ಲ. ಈ ಅನುದಾವನ್ನು ಪಡೆಯಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವ ಮೂಲಕ ರಾಜ್ಯ ಸರ್ಕಾರದಿಂದ ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡಲಾಗುತ್ತಿದೆ. |

ಸಂಖ್ಯೆ: ಆಇ 33 ಬಿಜಿಎಲ್ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ